OS No. 171/2022 PW-1

<u>**ದಿನಾಂಕ 28.06.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**</u>

<u>**ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ ಃ**</u>

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಿಃ06.08.2020 ರ ನೊಂದಾಯಿತ ಸ್ವಾದೀನ ರಹಿತ ಶುದ್ದ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ಪ್ರತಿವಾದಿಯವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಬಿ) ಎಂದು ಗುರುತಿಸಲಾಯಿತು, ನಮೂನೆ 1 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸರ್ವೆ ನಂಬರ್ 2/2 ರ ಆರ್ ಟಿ ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಿಃ25.07.2022 ರ ಲೀಗಲ್ ನೋಟೀಸ್ ನ ಕಛೇರಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, 8 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-5 ಎಂದು, 2 ಜಾರಿಯಾಗದೇ ಹಿಂದಿರುಗಿರುವ 2 ಅಂಚೆ ಲಕೋಟೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ಮತ್ತು ನಿಪಿ-7 ಎಂದು, 2 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-8 ಮತ್ತು ನಿಪಿ-9 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಪ್ರತಿವಾದಿ ಪರ ವಕೀಲರಿಂದ :**

ಸಮಯಾವಕಾಶ ಕೋರಿದ್ದರಿಂದ ಪಾಟೀ ಸವಾಲಿಗಾಗಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.